## <u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.</u>

## ಸಿ.ಸಿ. ಸಂಖ್ಯೆಃ 776/2024

**ಸಾಕ್ಷಿಯನ್ನು ದಿಃ 02.06.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | | |
|---|---|---|---|
| ಹೆಸರು | ಮಹದೇವ | ಸಿಡಬ್ಲ್ಯೂಃ 5 | ಪಿಡಬ್ಲ್ಯೂಃ 7 |
| ತಂದೆಯ ಹೆಸರು | ವೆಂಕಟಯ್ಯ | | |
| ವಯಸ್ಸು | 45 ವರ್ಷ | | |
| ಕೆಲಸ | ವ್ಯವಸಾಯ | | |
| ವಾಸಸ್ಥಳ | ಪಂಚವಳ್ಳಿ | | |

### <u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ</u>

ಸಾಕ್ಷಿ ನಿಪಿ-4ರ ಮಹಜರಿನಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಒಂದು ವರ್ಷದ ಹಿಂದೆ ಹುಣಸೂರು ಪಟ್ಟಣದ ಆಸ್ಪತ್ರೆಯ ಮುಂದೆ ಹಾಕಿದ್ದೇನೆ. ಯಾವ ಉದ್ದೇಶಕ್ಕಾಗಿ ಸಹಿ ಹಾಕಿದ್ದಿರಿ ಎಂದರೆ ಗಲಾಟೆಯಾಗಿತ್ತು ಸಹಿ ಹಾಕಿ ಎಂದು ಹೇಳಿದ ಕಾರಣ ಸಹಿ ಹಾಕಿದ್ದೇನೆ. ನನ್ನ ಜೊತೆ ಚಾಸಾ-6 ರವರು ಸಹಿ ಮಾಡಿದ್ದಾರೆ. ನಿಪಿ-4 ರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿಲ್ಲ. ನಾನು ಸಹಿ ಹಾಕುವಾಗ ಸಂಜೆ 4 ರಿಂದ 4.30 ಆಗಿತ್ತು.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

### <u>ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ</u>

ಚಾಸಾ-1 ಮತ್ತು ಆರೋಪಿತರ ಮಧ್ಯೆ ಗಲಾಟೆಯಾದ ಸಂಬಂಧ ಪೋಲಿಸರು ನೋಟೀಸ್ ನೀಡಿ ದಿಃ 07.12.2023 ರಂದು ಘಟನಾ ಸ್ಥಳದಲ್ಲಿ ಚಾಸಾ-2 ರವರು ಹಾಜರಿದ್ದು, ಸ್ಥಳ ತೋರಿಸಿದ ಮೆರೇಗೆ ನನ್ನ ಮತ್ತು ಚಾಸಾ-6 ರವರ ಸಮಕ್ಷಮ ನಿಪಿ-4ರ ಮಹಜರನ್ನು ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ಮಾಡಲಾಗಿದೆ ಎಂದರೆ ಸರಿಯಲ್ಲ. ನನಗೆ ನಿಪಿ-

4ರಲ್ಲಿ ಬರೆದ ವಿಷಯಗಳು ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. MRH ವಕೀಲರಿಂದಃ**

ಇಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.